# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ, ಪಿ.ಎಂ–ಕಿಸಾನ್ ಯೋಜನೆಯಲ್ಲಿ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಅಧಿಕಾರಿಗಳನ್ನು ನೋಂದಣಿ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವ ಕುರಿತು.

**ಓದಲಾಗಿದೆ**

1. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ ಕುರಿತ ಪತ್ರ ದಿ: 01.02.2019
2. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ ಮಾರ್ಗಸೂಚಿ.
3. ಸರ್ಕಾರದ ಅಧಿಸೂಚನೆ ಸಂ: ಕೃಇ 09 ಕೃಉಇ 2019, ದಿ:15.02.2019, ಸೇರ್ಪಡೆ ದಿ: 16.02.2019

**<u>ಪ್ರಸ್ತಾವನೆ:</u>**

ಮೇಲೆ ಓದಲಾದ (1)ರ ಪತ್ರದಲ್ಲಿ ಭಾರತ ಸರ್ಕಾರವು ಸಣ್ಣ ಮತ್ತು ಅತಿ ಸಣ್ಣ ರೈತರ ಆದಾಯ ವೃದ್ಧಿಸಲು ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ (PM-KISAN) ಎಂಬ ಹೊಸ ಯೋಜನೆಯನ್ನು ಘೋಷಣೆ ಮಾಡಿರುತ್ತದೆ ಹಾಗೂ ಯೋಜನೆ ಅನುಷ್ಠಾನಕ್ಕೆ ಪೂರಕವಾಗಿ ಮೇಲೆ (2)ರಲ್ಲಿ ಓದಲಾದ ಮಾರ್ಗಸೂಚಿಯನ್ನು ಸಹ ಹೊರಡಿಸಿರುತ್ತದೆ. ಅನುಷ್ಠಾನ ಮಾರ್ಗಸೂಚಿಯನ್ವಯ ಈ ಯೋಜನೆಯಡಿ 2 ಹೆಕ್ಟೇರಿಗಿಂತ ಕಡಿಮೆ ಭೂ ಒಡೆತನ ಹೊಂದಿರುವ ಪ್ರತಿ ಅರ್ಹ ರೈತ ಕುಟುಂಬಕ್ಕೆ ವರ್ಷಕ್ಕೆ ರೂ. 6000ಗಳನ್ನು ಪ್ರತಿ ನಾಲ್ಕು ತಿಂಗಳಿಗೊಮ್ಮೆಯಂತೆ ಒಟ್ಟು 3 ಸಮಾನ ಕಂತುಗಳಲ್ಲಿ ನೀಡಲು ಅನುವಾಗುವಂತೆ ಮೇಲೆ (3)ರಲ್ಲಿ ಓದಲಾದ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸದರಿ ಅಧಿಸೂಚನೆಯ ಪುಟ ಸಂಖ್ಯೆ 2, ಸಿ 1 ರಲ್ಲಿ "ರೈತರು ಈ ಯೋಜನೆಯ ಲಾಭ ಪಡೆಯಲು ಯಾವುದೇ ಸರ್ಕಾರಿ ಸ್ವಾಮ್ಯದ ಕೇಂದ್ರಗಳನ್ನು ಅಂದರೆ ಬಾಪೂಜೀ ಸೇವಾ ಕೇಂದ್ರಗಳು, ರೈತ ಸಂಪರ್ಕ ಕೇಂದ್ರಗಳು, ಅಟಲ್ ಜಿ ಜನಸ್ನೇಹಿ ಕೇಂದ್ರಗಳು, ಅಥವಾ ಇತರೆ ಸರ್ಕಾರಿ ಸೇವಾ ಕೇಂದ್ರಗಳು/ಕಚೇರಿಗಳು ಸರ್ಕಾರದ ಮಾನ್ಯತೆ ಪಡೆದಿರುವ ಅಥವಾ ರಾಜ್ಯ/ಜಿಲ್ಲಾ ಮಟ್ಟದ ವಿಮರ್ಶೆ/ಮೇಲ್ವಿಚಾರಣೆ ಸಮಿತಿಗಳು ಯೋಜನೆ ನೋಂದಣಿಗಾಗಿ ಅಧಿಸೂಚಿಸಿದ ಯೋಜನೆಯಂತೆ ಸಂಪರ್ಕಿಸಬಹುದು" ಎಂದು ತಿಳಿಸಲಾಗಿದೆ.

ಕೃಷಿ ಇಲಾಖೆ ಕಛೇರಿಗಳಲ್ಲಿ ಮತ್ತು ನಾಡ ಕಛೇರಿಗಳಲ್ಲಿ ಈಗಾಗಲೇ ನೋಂದಣಿ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ರೈತರ ನೋಂದಣಿ ಪ್ರಕ್ರಿಯೆ ತ್ವರಿತವಾಗಿ ಪೂರ್ಣಗೊಳಿಸಲು, ತೋಟಗಾರಿಕೆ ಇಲಾಖೆ ಹಾಗೂ ರೇಷ್ಮೆ ಇಲಾಖೆಗಳನ್ನು ತೊಡಗಿಸಿಕೊಳ್ಳುವುದು ಅವಶ್ಯವಾಗಿರುವುದನ್ನು ಮನಗಂಡು ಸರ್ಕಾರವು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

## <u>ಸರ್ಕಾರದ ಆದೇಶ ಸಂಖ್ಯೆ; ಕೃಇ 09 ಕೃಉಇ 2019, ಬೆಂಗಳೂರು, ದಿನಾಂಕ: 25.02.2019.</u>

ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರು ಇರುವುದರಿಂದ, ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ (PM-KISAN) ಯೋಜನೆಯ ಮಾರ್ಗಸೂಚಿಗೊಳಪಟ್ಟು ಯೋಜನೆಯ ಲಾಭವನ್ನು ತ್ವರಿತವಾಗಿ ಅರ್ಹ ಫಲಾನುಭವಿ ರೈತರುಗಳಿಗೆ ತಲುಪಿಸಲು, ರಾಜ್ಯ ಸರ್ಕಾರದ ಅಧೀನಕ್ಕೊಳಪಡುವ

ತೋಟಗಾರಿಕೆ ಇಲಾಖೆ ಹಾಗೂ ರೇಷ್ಮೆ ಇಲಾಖೆಯ ಎಲ್ಲಾ ಕಛೇರಿಗಳನ್ನು ಸಹ ಯೋಜನೆಯ ನೋಂದಣಿ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವಂತೆ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

(ಎಂ. ಮಹೇಶ್ವರರಾವ್)
ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ

ಕಂಪೈಲರ್, ಕರ್ನಾಟಕ ಗೆಜೆಟ್, ಬೆಂಗಳೂರು, ಇವರು ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕ್ರಮ ತೆಗೆದುಕೊಳ್ಳುವುದು.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
7. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು/ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಆಯುಕ್ತರು, ರೇಷ್ಮೆ ಇಲಾಖೆ ಬೆಂಗಳೂರು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
12. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
15. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
16. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.